ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿಗಳ ನಿರ್ಲಕ್ಷ್ಯತನ ಬಗ್ಗೆ

ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

455 (420) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಜಿಲ್ಲೆಯಲ್ಲಿ ಒಟ್ಟು ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು)

(ಆ) ಸರ್ಕಾರಿ ಆಸ್ಪತ್ರೆಗಳಲ್ಲಿ ಅಥವಾ ಗ್ರಾಮೀಣ ಆಸ್ಪತ್ರೆಗಳಲ್ಲಿ ವೈದ್ಯರು ಕೆಲಸ ಮಾಡಲು ಹಿಂದೇಟು ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಅವರ ವಿರುದ್ಧ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಇ) ಕೆಲವೊಂದು ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳು ರೋಗಿಗಳಿಗೆ ಸೂಕ್ತವಾಗಿ ಸ್ಪಂದಿಸುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ;

(ಈ) ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ನಿರ್ಲಕ್ಷ್ಯ ತೋರುತ್ತಿರುವುದರಿಂದ ಅಲ್ಲಿನ ನರ್ಸ್‌ಗಳೇ ವೈದ್ಯರಂತೆ ಚಿಕಿತ್ಸೆ ನೀಡುತ್ತಿದ್ದು, ಇದರಿಂದಾಗಿ ರೋಗಿಗಳ ಮೇಲೆ ಅಡ್ಡಪರಿಣಾಮಗಳು ಬೀರುವ ಸಾಧ್ಯತೆಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ?